ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

**ಕನ್ನಡ ಕಾಯಕ ವರ್ಷ- 2020-21**

ಸಂಖ್ಯೆ:ಕಾಶಿಇ/ನೇವಿ-1/ಅಉಅ/13/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:06.07.2021.

# ಸುತ್ತೋಲೆ

ವಿಷಯ: 2020-21ನೇ ಶೈಕ್ಷಣಿಕ ಸಾಲಿನಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳುವ ಬಗ್ಗೆ.

ಉಲ್ಲೇಖ: 1) ಈ ಕಛೇರಿಯ ದಿನಾಂಕ: 07-05-2021 ರ ಸುತ್ತೋಲೆ ಸಂಖ್ಯೆ: ಕಾಶಿಇ/ನೇವಿ-1/ಅಉಅ/13/2020-21.

2) ವಿವಿಧ ಕಾಲೇಜಗುಳ ಪ್ರಾಂಶುಪಾಲರು ಸಲ್ಲಿಸಿರುವ ಮನವಿಗಳು.

* * * * * * *

2020-21ನೇ ಶೈಕ್ಷಣಿಕ ಸಾಲಿನಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಕಾಲೇಜುವಾರು ನಿಗದಿಪಡಿಸಿದ ಸಂಖ್ಯಾಮಿತಿಗೊಳಪಟ್ಟು ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ಉಲ್ಲೇಖ-(1) ರ ಈ ಕಛೇರಿಯ ಸುತ್ತೋಲೆಯಲ್ಲಿ ಈಗಾಗಲೇ ಅನುಮತಿ ನೀಡಲಾಗಿದೆ. ಹೀಗೆ ಆಯ್ಕೆ ಮಾಡಿಕೊಂಡ ನಂತರವೂ ಉಳಿಕೆಯಾದ ಕಾರ್ಯಭಾರಕ್ಕೆ ಹೆಚ್ಚುವರಿ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಅನುಮತಿ ಕೋರಿ ಉಲ್ಲೇಖ-(2)ರಲ್ಲಿ ಕೆಲವು ಕಾಲೇಜಗಳಿಂದ ಪ್ರಸ್ತಾವನೆಗಳನ್ನು ಸಲ್ಲಿಸಲಾಗಿರುತ್ತದೆ. ಸದರಿ ಪ್ರಸ್ತಾವನೆಗಳಲ್ಲಿ ನೀಡಿರುವ ಮಾಹಿತಿಗಳು ಅಪೂರ್ಣವಾಗಿದ್ದು, ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಲು ಕೆಲವು ಮಾಹಿತಿಗಳ ಅಗತ್ಯವಿರುತ್ತದೆ. ಆದ್ದರಿಂದ ಹೆಚ್ಚುವರಿ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಅನುಮತಿ ನೀಡುವ ಸಂಬಂಧ ಅಗತ್ಯವಿರುವ ಮಾಹಿತಿಗಳನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿಯೇ ಭರ್ತಿ ಮಾಡಿ, ಕೂಡಲೇ ಈ ಕಛೇರಿಗೆ ಸಲ್ಲಿಸಲು ಸೂಚಿಸಲಾಗಿದೆ. ಹಾಗೂ ಸದರಿ ನಮೂನೆಯಲ್ಲಿ ಮಾಹಿತಿಯನ್ನು ಸಲ್ಲಿಸದಿರುವ ಪ್ರಸ್ತಾವನೆಯನ್ನು ಪರಿಗಣಿಸಲಾಗುವುದಿಲ್ಲವೆಂದು ಸಹ ತಿಳಿಸಲಾಗಿದೆ.

6/7/21

ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

**ಇವರಿಗೆ,**

ಸಂಬಂಧಪಟ್ಟ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

**ಪ್ರತಿಯನ್ನು:**

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2. ಮಾಹಿತಿ & ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
3. ಕಛೇರಿ ಪ್ರತಿ.

E:\Bhaskar\2020-21 Guest Faculty Circular.docx

ನಿಗದಿತ ನಮೂನೆ

## 2020–21 ನೇ ಸಾಲಿನಲ್ಲಿ ಹೆಚ್ಚುವರಿ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಅನುಮತಿ ನೀಡುವ ಸಂಬಂಧ ಅಗತ್ಯವಿರುವ ಮಾಹಿತಿಗಳು

| ಕ್ರ ಸಂ. | ವಿಷಯ | 2020–21ನೇ ಸಾಲಿನಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆ | 2020–21 ನೇ ಸಾಲಿನ ಕಾರ್ಯಭಾರ (ಡಬ್ಲ್ಯೂ & ಎಸ್ ನಮೂನೆಯನ್ವಯ) | | ಒಟ್ಟು ಕಾರ್ಯಭಾರ | ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಪೂರ್ಣಕಾಲಿಕ ಉಪನ್ಯಾಸಕರ ಸಂಖ್ಯೆ | ಪೂರ್ಣಕಾಲಿಕ ಉಪನ್ಯಾಸಕರಿಗೆ ಹಂಚಿಕೆ ಮಾಡಲಾದ ಕಾರ್ಯಭಾರ | ಪೂರ್ಣಕಾಲಿಕ ಉಪನ್ಯಾಸಕರಿಗೆ ಹಂಚಿಕೆ ಮಾಡಿದ ನಂತರ ಉಳಿಕೆಯಾದ ಕಾರ್ಯಭಾರ | ಈ ಉಳಿಕೆ ಕಾರ್ಯಭಾರಕ್ಕೆ ಅಗತ್ಯವಿರುವ ಅತಿಥಿ ಉಪನ್ಯಾಸಕರ ಸಂಖ್ಯೆ | ದಿ:07.05.2021ರ ಕೇಂದ್ರ ಕಛೇರಿಯ ಸುತ್ತೋಲೆಯಲ್ಲಿ ಹಂಚಿಕೆ ಮಾಡಲಾದ ಅತಿಥಿ ಉಪನ್ಯಾಸಕರ ಸಂಖ್ಯೆ | ಈ ಹಂಚಿಕೆಯಂತೆ 2020–21 ನೇ ಸಾಲಿನಲ್ಲಿ ಆಯ್ಕೆಮಾಡಲಾದ ಅತಿಥಿ ಉಪನ್ಯಾಸಕರ ಸಂಖ್ಯೆ | ಆಯ್ಕೆಗೊಂಡ ಅತಿಥಿ ಉಪನ್ಯಾಸಕರಿಗೆ ಹಂಚಿಕೆ ಮಾಡಲಾದ ಕಾರ್ಯಭಾರ | ಆಯ್ಕೆಗೊಂಡ ಅತಿಥಿ ಉಪನ್ಯಾಸಕರಿಗೆ ಹಂಚಿಕೆಯ ನಂತರ ಉಳಿಕೆಯಾದ ಕಾರ್ಯಭಾರ | ಈ ಉಳಿಕೆ ಕಾರ್ಯಭಾರಕ್ಕೆ ಅಗತ್ಯವಿರುವ ಅತಿಥಿ ಉಪನ್ಯಾಸಕರ ಸಂಖ್ಯೆ | ಸಮರ್ಥನೆ |
|---|---|---|---|---|---|---|---|---|---|---|---|---|---|---|---|
| | | | ಪದವಿ | ಸ್ನಾತಕೋತ್ತರ | | | | | | | | | | | |
| 1 | 2 | 3 | 4 | 5 | 6 | 7 | 8 | 9 | 10 | 11 | 12 | 13 | 14 | 15 | 16 |
| | | | | | | | | | | | | | | | |
| | | | | | | | | | | | | | | | |
| | | | | | | | | | | | | | | | |
| | | | | | | | | | | | | | | | |
| | | | | | | | | | | | | | | | |
| | | | | | | | | | | | | | | | |
| | | | | | | | | | | | | | | | |
| | | | | | | | | | | | | | | | |
| | | | | | | | | | | | | | | | |
| | | | | | | | | | | | | | | | |
| ಒಟ್ಟು | | | | | | | | | | | | | | | |

ಪ್ರಾಂಶುಪಾಲರ ಸಹಿ & ಮೊಹರು